**All India Radio: Bangalore**
**National Bulletin In Kannada**
**08.09.2026 1.10 pm**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**08.09.2026 1.10 pm**

**<>><><*><><<>**

ಮುಖ್ಯಾಂಶಗಳು

**೧. ಗುಜರಾತ್‌ನ ವಡೋದರದಲ್ಲಿ ೩೫ ಸಾವಿರ ಕೋಟಿ ರೂಪಾಯಿಗೂ ಅಧಿಕ ಮೌಲ್ಯದ ಯೋಜನೆಗಳಿಗೆ ಪ್ರಧಾನಿ ನರೇಂದ್ರ ಮೋದಿ ಚಾಲನೆ**

**೨. ಇಂದಿನಿಂದ ಮೂರು ದಿನಗಳ ಭೇಟಿಗಾಗಿ ಶ್ರೀಲಂಕಾಗೆ ತೆರಳಿದ ರಕ್ಷಣಾ ಸಚಿವ ರಾಜನಾಥ್ ಸಿಂಗ್**

**೩. ಬಲೂಚಿಸ್ತಾನದಲ್ಲಿ ಮಾನವ ಹಕ್ಕು ಉಲ್ಲಂಘನೆ ಕುರಿತು ವಿಶ್ವಸಂಸ್ಥೆ ತಜ್ಞರಿಂದ ಕಳವಳ; ಸ್ವತಂತ್ರ ತನಿಖೆಗೆ ಆಗ್ರಹ**

**೪. ಏಷ್ಯಾ ಕಪ್ ಹಾಕಿ; ದಕ್ಷಿಣ ಕೊರಿಯಾ ವಿರುದ್ಧ ಭಾರತದ ಜೂನಿಯರ್ ತಂಡಕ್ಕೆ ಜಯ**

**೫. ಯುಎಸ್ ಓಪನ್ ಟೆನಿಸ್; ಪುರುಷರ ಸಿಂಗಲ್ಸ್ ಕ್ವಾರ್ಟರ್ ಫೈನಲ್ ಪ್ರವೇಶಿಸಿದ ಜರ್ಮನಿಯ ಅಲೆಗ್ಸಾಂಡರ್ ಜೆರೆವ್**

**<>><><*><><<>**

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರಿಂದು ಗುಜರಾತ್‌ಗೆ ಭೇಟಿ ನೀಡಿದ್ದು, ವಡೋದರಾದಲ್ಲಿ ೩೫ ಸಾವಿರ ಕೋಟಿ ರೂಪಾಯಿಗೂ ಅಧಿಕ ಮೌಲ್ಯದ ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ ಹಾಗೂ ಉದ್ಘಾಟನೆ ನೆರವೇರಿಸಿದರು. ಇಂದು ಚಾಲನೆ ದೊರೆತ ಯೋಜನೆಗಳಲ್ಲಿ ೧೦ ಸಾವಿರದ ೭೦೦ ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾದ 'ಪಶ್ಚಿಮ ಮೀಸಲಾದ ಸರಕು ಸಾಗಣೆ ಕಾರಿಡಾರ್'ನ ಪೂರ್ಣಗೊಂಡ ಭಾಗಗಳನ್ನು ರಾಷ್ಟ್ರಕ್ಕೆ ಸಮರ್ಪಿಸಲಾಯಿತು. ಇದರ ಜೊತೆಗೆ ವಿವಿಧ ಸರಕು ಹಾಗೂ ಹೊಸ ಪ್ರಯಾಣಿಕ ರೈಲು ಸೇವೆಗಳಿಗೆ ಪ್ರಧಾನಿ ಚಾಲನೆ ನೀಡಲಿದ್ದು, ಅಲಿರಾಜ್‌ಪುರದ ಗಿರಿಜನ ಪ್ರದೇಶಗಳನ್ನು ರೈಲು ಜಾಲಕ್ಕೆ ಜೋಡಿಸುವ ಜೋಬತ್-ತಾಂಡಾ ರಸ್ತೆ ಹೊಸ ಮಾರ್ಗವನ್ನು ಉದ್ಘಾಟಿಸಿದರು. ೯ ಸಾವಿರದ ೭೦೦ ಕೋಟಿ ರೂಪಾಯಿ ಮೌಲ್ಯದ ರೈಲ್ವೆ

ಯೋಜನೆಗಳು, ೧ ಸಾವಿರದ ೭೮೦ ಕೋಟಿ ರೂಪಾಯಿ ವೆಚ್ಚದ ರಾಷ್ಟ್ರೀಯ ಹೆದ್ದಾರಿ ಯೋಜನೆಗಳು ಹಾಗೂ ಗುಜರಾತ್ ಸರ್ಕಾರದ ೨ ಸಾವಿರದ ೬೦೦ ಕೋಟಿ ರೂಪಾಯಿ ಮೌಲ್ಯದ ವಿವಿಧ ಯೋಜನೆಗಳಿಗೆ ಪ್ರಧಾನಿ ಚಾಲನೆ ನೀಡಿದರು. ಇಂದು ಮಧ್ಯಾಹ್ನ ಪ್ರಧಾನಿ ನೌಸಾರಿಯಲ್ಲಿ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಲಿದ್ದಾರೆ. ಸಂಜೆ ಮುಂಬೈಗೆ ತೆರಳಲಿರುವ ಪ್ರಧಾನಮಂತ್ರಿಯವರು, ಇದೇ ೧೧ ರವರೆಗೆ ನಡೆಯಲಿರುವ ೭ನೇ ಆವೃತ್ತಿಯ 'ಗ್ಲೋಬಲ್ ಫಿನ್ ಟೆಕ್ ಫೆಸ್ಟ್ ೨೦೨೬' ಅನ್ನು ಉದ್ಘಾಟಿಸಿ ಮಾತನಾಡಲಿದ್ದಾರೆ. ಈ ಸಮ್ಮೇಳನದಲ್ಲಿ ಕೃತಕ ಬುದ್ಧಿಮತ್ತೆ ಹಾಗೂ ಕ್ವಾಂಟಮ್ ತಂತ್ರಜ್ಞಾನಗಳ ಮೂಲಕ ಡಿಜಿಟಲ್ ಹಣಕಾಸು ವ್ಯವಸ್ಥೆಯನ್ನು ಸಕ್ಷಮಗೊಳಿಸುವ ಕುರಿತು ಚರ್ಚೆಗಳು ನಡೆಯಲಿವೆ.

**<><><*><><<>**

ರಕ್ಷಣಾ ಸಚಿವ ರಾಜನಾಥ್ ಸಿಂಗ್ ಇಂದಿನಿಂದ ಮೂರು ದಿನಗಳ ಅಧಿಕೃತ ಭೇಟಿಗಾಗಿ ಶ್ರೀಲಂಕಾಗೆ ತೆರಳಿದ್ದಾರೆ. ದೀರ್ಘಕಾಲದ ಸ್ನೇಹ ಸಂಬಂಧ ಹಾಗೂ ಐತಿಹಾಸಿಕ ಮತ್ತು ನಾಗರಿಕತೆಯ ಬಾಂಧವ್ಯದ ಜೊತೆಗೆ, 'ನೆರೆಹೊರೆ ಮೊದಲು' ಮತ್ತು 'ಮಹಾಸಾಗರ' ಉಪಕ್ರಮಗಳ ಅಡಿಯಲ್ಲಿ ಶ್ರೀಲಂಕಾ, ಭಾರತದ ಪ್ರಮುಖ ಪಾಲುದಾರ ರಾಷ್ಟ್ರಗಳಲ್ಲಿ ಒಂದಾಗಿದೆ ಎಂದು ಸಚಿವ ರಾಜನಾಥ್ ಸಿಂಗ್ ಸಾಮಾಜಿಕ ಜಾಲತಾಣದಲ್ಲಿ ಹೇಳಿದ್ದಾರೆ. ಶ್ರೀಲಂಕಾದ ನಾಯಕರೊಂದಿಗೆ ಫಲಪ್ರದ ಮಾತುಕತೆ ನಡೆಸಲು ಎದುರು ನೋಡುತ್ತಿರುವುದಾಗಿ ಅವರು ತಿಳಿಸಿದ್ದಾರೆ. ಪ್ರವಾಸದ ಸಂದರ್ಭದಲ್ಲಿ ರಕ್ಷಣಾ ಸಚಿವರು ಶ್ರೀಲಂಕಾದಲ್ಲಿರುವ ಭಾರತೀಯ ಸಮುದಾಯದೊಂದಿಗೂ ಸಂವಾದ ನಡೆಸಲಿದ್ದಾರೆ.

**<><><*><><<>**

ಖ್ಯಾತ ಗಾಯಕ ಹಾಗೂ ಅಸ್ಸಾಂ ಮಾಜಿ ವಿಧಾನಸಭಾ ಸದಸ್ಯ ಭಾರತ ರತ್ನ ಪುರಸ್ಕೃತ ಡಾ.ಭೂಪೇನ್ ಹಜಾರಿಕಾ ಅವರ ಜನ್ಮದಿನವಾದ ಇಂದು ಅವರಿಗೆ ಪ್ರಧಾನಮಂತ್ರಿ ನರೇಂದ್ರ ಮೋದಿ, ಗೃಹ ಸಚಿವ ಅಮಿತ್ ಶಾ, ರಕ್ಷಣಾ ಸಚಿವ ರಾಜನಾಥ್ ಸಿಂಗ್ ಸೇರಿದಂತೆ ವಿವಿಧ ಗಣ್ಯರು ಹಜಾರಿಕಾ ಗೌರವ ನಮನ ಸಲ್ಲಿಸಿದ್ದಾರೆ. ಸಾಮಾಜಿಕ ಮಾಧ್ಯಮ ಸಂದೇಶದಲ್ಲಿ ಪ್ರಧಾನಿ ನರೇಂದ್ರ ಮೋದಿ, ಡಾ.ಹಜಾರಿಕಾ ಅವರ ಹಾಡುಗಳು ಜನರನ್ನು ಮತ್ತಷ್ಟು ಹತ್ತಿರ ತಂದಿದ್ದು, ಅವರ ಸಂಗೀತದ ಮೂಲಕ ಅಸಂಖ್ಯಾತ ಜನರ ಆಲೋಚನೆ ಮತ್ತು ಆಶೋತ್ತರಗಳಿಗೆ ರೂಪ ನೀಡಿದರು ಎಂದು ಸ್ಮರಿಸಿದ್ದಾರೆ. ಭೂಪೇನ್ ಅವರ ಸಂಗೀತವು ಅಸ್ಸಾಂನ ವೈವಿಧ್ಯಮಯ ಸಂಸ್ಕೃತಿಯನ್ನು ವಿಶ್ವ ವೇದಿಕೆಗೆ ಕೊಂಡೊಯ್ದಿದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಸಚಿವ

ಅಮಿತ್ ಶಾ ಹೇಳಿದ್ದಾರೆ. ಡಾ.ಹಜಾರಿಕಾ ಅವರು ಅಸ್ಸಾಂನ ಆತ್ಮಕ್ಕೆ ಧ್ವನಿ ನೀಡಿದ ಮಹಾನ್ ಸಾಂಸ್ಕೃತಿಕ ಪ್ರತೀಕ ಹಾಗೂ ದೂರದೃಷ್ಟಿಯುಳ್ಳ ವ್ಯಕ್ತಿಯಾಗಿದ್ದರು ಎಂದು ಸಚಿವ ರಾಜನಾಥ್ ಸಿಂಗ್ ಸಾಮಾಜಿಕ ಮಾಧ್ಯಮ ಸಂದೇಶದಲ್ಲಿ ತಿಳಿಸಿದ್ದಾರೆ.

<>><><*><><<>

ಸೌದಿ ಅರೇಬಿಯಾ ಭೇಟಿಯಲ್ಲಿರುವ ವಿದೇಶಾಂಗ ವ್ಯವಹಾರಗಳ ರಾಜ್ಯ ಸಚಿವ ಕೀರ್ತಿ ವರ್ಧನ್ ಸಿಂಗ್ ಅಲ್ಲಿನ ಭಾರತೀಯ ಸಮುದಾಯದೊಂದಿಗೆ ಸಂವಾದ ನಡೆಸಿದರು. ರಾಯಭಾರ ಕಚೇರಿಯ ಆಶ್ರಯದಲ್ಲಿ ಅಖಿಲ ಭಾರತ ಸ್ಟೀರಿಂಗ್ ಸಮಿತಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಸಚಿವರು ಭಾರತೀಯ ಸಮುದಾಯದೊಂದಿಗೆ ಸಭೆ ನಡೆಸಿದರು. ವ್ಯಾಪಾರ, ಹೂಡಿಕೆ, ಇಂಧನ ಮತ್ತು ಸಂಸ್ಕೃತಿ ಕ್ಷೇತ್ರಗಳ ಮೂಲಕ ಭಾರತ-ಸೌದಿ ಅರೇಬಿಯಾ ಬಾಂಧವ್ಯವನ್ನು ಬಲಪಡಿಸುವಲ್ಲಿ ಭಾರತೀಯ ಸಮುದಾಯದ ಅಮೂಲ್ಯ ಕೊಡುಗೆಯನ್ನು ಅವರು ಶ್ಲಾಘಿಸಿದರು. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ವಿಕಸಿತ ಭಾರತ ೨೦೪೭ ದೃಷ್ಟಿಕೋನವನ್ನು ಸಾಕಾರಗೊಳಿಸಲು ಭಾರತೀಯ ಸಮುದಾಯವೂ ಕೊಡುಗೆ ನೀಡಬೇಕು ಎಂದು ಅವರು ಕರೆ ನೀಡಿದರು.

<>><><*><><<>

ಪಾಕಿಸ್ತಾನದ ಬಲೂಚಿಸ್ತಾನ್ ಪ್ರಾಂತ್ಯದಲ್ಲಿ ಬಲೂಚ್ ನಿವಾಸಿ ಇಮ್ರಾನ್ ಅಲಿ ಎಂಬುವವರ ಬಲವಂತ ನಾಪತ್ತೆ ಹಾಗೂ ಎನ್‌ಕೌಂಟರ್ ಹೆಸರಿನಲ್ಲಿ ನಡೆದ ಹತ್ಯೆಯ ಕುರಿತು ವಿಶ್ವಸಂಸ್ಥೆ ಮಾನವ ಹಕ್ಕು ತಜ್ಞರು ತೀವ್ರ ಕಳವಳ ವ್ಯಕ್ತಪಡಿಸಿದ್ದಾರೆ. ಈ ಪ್ರಕರಣದ ಕುರಿತು ತಕ್ಷಣವೇ ಸಮಗ್ರ, ಸ್ವತಂತ್ರ ಹಾಗೂ ನಿಷ್ಪಕ್ಷಪಾತ ತನಿಖೆ ನಡೆಸುವಂತೆ ಪಾಕಿಸ್ತಾನ ಸರ್ಕಾರವನ್ನು ತಜ್ಞರು ಒತ್ತಾಯಿಸಿದ್ದಾರೆ. ಕಳೆದ ವರ್ಷ ಆಗಸ್ಟ್‌ನಲ್ಲಿ ಭದ್ರತಾ ಸಿಬ್ಬಂದಿಯಿಂದ ಅಪಹರಣಕ್ಕೆ ಒಳಗಾಗಿದ್ದಾರೆ ಎನ್ನಲಾದ ಇಮ್ರಾನ್ ಅಲಿ ಅವರ ಸುಳಿವು ಸುಮಾರು ಒಂದು ವರ್ಷದವರೆಗೆ ಲಭ್ಯವಿರಲಿಲ್ಲ. ಆದರೆ, ೨೦೨೫ರ ಮೇ ನಲ್ಲಿ ನಡೆದ ಎನ್‌ಕೌಂಟರ್‌ನಲ್ಲಿ ಅವರು ಮೃತಪಟ್ಟಿರುವುದಾಗಿ ಪಾಕಿಸ್ತಾನ ಅಧಿಕಾರಿಗಳು ಘೋಷಿಸಿದ್ದರು. ಬಲೂಚಿಸ್ತಾನದಲ್ಲಿ ಪತ್ತೆಯಾಗುತ್ತಿರುವ ಇತರ ಗುರುತಿಸಲಾಗದ ಮೃತ ದೇಹಗಳ ಕುರಿತು ಕಳವಳ ವ್ಯಕ್ತಪಡಿಸಿರುವ ವಿಶ್ವಸಂಸ್ಥೆ ತಜ್ಞರು ಈ ಪ್ರಾಂತ್ಯದಲ್ಲಿ ಬಲವಂತದ ನಾಪತ್ತೆ, ಚಿತ್ರಹಿಂಸೆ ಹಾಗೂ ಕಾನೂನುಬಾಹಿರ ಹತ್ಯೆಯಂತಹ ಘಟನೆಗಳು ವ್ಯಾಪಕವಾಗಿ ನಡೆಯುತ್ತಿರುವ ಬಗ್ಗೆ ಎಚ್ಚರಿಸಿದ್ದಾರೆ.

<>><><*><><<>

ಇಂದು ಅಂತಾರಾಷ್ಟ್ರೀಯ ಸಾಕ್ಷರತಾ ದಿನ. ಈ ಹಿನ್ನಲೆಯಲ್ಲಿ ಸಾಮಾಜಿಕ ಜಾಲತಾಣದಲ್ಲಿ ಸಂದೇಶ ಹಂಚಕೊಂಡಿರುವ ಕೇಂದ್ರ ಶಿಕ್ಷಣ ಸಚಿವ ಪ್ರಲ್ಹಾದ್ ಜೋಶಿ, ಸಾಕ್ಷರತೆಯು ಜ್ಞಾನ, ಅವಕಾಶ ಮತ್ತು ಉತ್ತಮ ಭವಿಷ್ಯದ ಬಾಗಿಲು ತೆರೆಯುತ್ತದೆ ಎಂದು ಹೇಳಿದ್ದಾರೆ. ಶಿಕ್ಷಣದ ಪರಿವರ್ತನಾ ಶಕ್ತಿಯನ್ನು ಸಂಭ್ರಮಿಸುವಂತೆ ಹಾಗೂ ಕಲಿಕೆಯ ಪಯಣದಲ್ಲಿ ಯಾರೂ ಹಿಂದೆ ಉಳಿಯದಂತೆ ನೋಡಿಕೊಳ್ಳುವ ಬದ್ಧತೆಯನ್ನು ಪುನರುಚ್ಚರಿಸುವಂತೆ ನಾಗರಿಕರಿಗೆ ಸಾಮಾಜಿಕ ಜಾಲತಾಣದಲ್ಲಿ ಕರೆ ನೀಡಿದ್ದಾರೆ. ಶಿಕ್ಷಣ ಪಡೆದ ಮತ್ತು ಸಬಲ ನಾಗರಿಕ ಸಮುದಾಯವೇ ವಿಕಸಿತ ಭಾರತಕ್ಕೆ ಅತ್ಯಂತ ಬಲಿಷ್ಠ ಅಡಿಪಾಯವಾಗಿದೆ ಎಂದು ಸಚಿವರು ಹೇಳಿದ್ದಾರೆ.

**<>><><*><><<>**

ನವದೆಹಲಿಯ ತಮ್ಮ ನಿವಾಸದ ಬಳಿ ಹಲ್ಲೆಗೊಳಗಾಗಿ ಮೃತಪಟ್ಟ ಮಣಿಪುರದ ಖ್ಯಾತ ಸಂಗೀತಗಾರ ಚಾಂಗ್‌ಥಮ್ ವಿಕ್ರಮ್ ಸಿಂಗ್ ಅವರ ನಿಧನಕ್ಕೆ ಲೋಕಸಭಾ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಸಂತಾಪ ಸೂಚಿಸಿದ್ದಾರೆ. ಘಟನೆ ಕುರಿತು ತಕ್ಷಣವೇ ಸಮಗ್ರ ತನಿಖೆ ನಡೆಸಿ, ತಪ್ಪಿತಸ್ಥರಿಗೆ ಶಿಕ್ಷೆ ವಿಧಿಸಬೇಕು ಎಂದು ಆಗ್ರಹಿಸಿದ್ದಾರೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸರು ಏಳು ಜನರನ್ನು ಬಂಧಿಸಿದ್ದು, ಒಬ್ಬ ಅಪ್ರಾಪ್ತನನ್ನು ವಶಕ್ಕೆ ಪಡೆದಿದ್ದಾರೆ.

**<>><><*><><<>**

ಮಧ್ಯಪ್ರದೇಶದ ವಿದಿಶಾದ ಅಟಲ್ ಬಿಹಾರಿ ವಾಜಪೇಯಿ ವೈದ್ಯಕೀಯ ಕಾಲೇಜಿನಲ್ಲಿ ಇಂದು ಕೀಮೋಥೆರಪಿ ಡೇ-ಕೇರ್ ಘಟಕವನ್ನು ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಮತ್ತು ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಜಂಟಿಯಾಗಿ ಉದ್ಘಾಟಿಸುತ್ತಿದ್ದಾರೆ. ಹೊಸ ಘಟಕದಿಂದ ಕ್ಯಾನ್ಸರ್ ರೋಗಿಗಳಿಗೆ ಉತ್ತಮ ಹಾಗೂ ವ್ಯವಸ್ಥಿತ ಕೀಮೋಥೆರಪಿ ಸೇವೆ ದೊರೆಯಲಿದೆ. ಉದ್ಘಾಟನೆಯ ಬಳಿಕ ಕೇಂದ್ರ ಸಚಿವರು ಕೇಂದ್ರಕ್ಕೆ ಭೇಟಿ ನೀಡಿ ಅಲ್ಲಿನ ಸೌಲಭ್ಯಗಳನ್ನು ಪರಿಶೀಲಿಸಲಿದ್ದಾರೆ. ಮಧ್ಯಪ್ರದೇಶ ಉಪಮುಖ್ಯಮಂತ್ರಿ ರಾಜೇಂದ್ರ ಶುಕ್ಲಾ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ವೈದ್ಯರು, ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಉಪಸ್ಥಿತರಿರುವರು.

**<>><><*><><<>**

ಚೀನಾದ ಮೋಚೆಯಲ್ಲಿ ನಡೆಯುತ್ತಿರುವ ಏಷ್ಯ ಕಪ್ ಹಾಕಿ ಟೂರ್ನಿಯಲ್ಲಿ ದಕ್ಷಿಣ ಕೊರಿಯಾ ವಿರುದ್ಧ ೭-೩ ಅಂತರದ ಭರ್ಜರಿ ಜಯ ಸಾಧಿಸಿದ ಭಾರತದ ಜೂನಿಯರ್ ಪುರುಷರ ತಂಡ ಸೆಮಿಫೈನಲ್

ಪ್ರವೇಶದ ಹಾದಿಯನ್ನು ಮತ್ತಷ್ಟು ಸುಗಮಗೊಳಿಸಿಕೊಂಡಿದೆ. ಪಂದ್ಯದ ಕೊನೆಯ ಹಂತದಲ್ಲಿ ತ್ರಿವಳಿ ಗೋಲು ಗಳಿಸಿ ಭಾರತದ ತಂಡ ಪಂದ್ಯದ ಮೇಲೆ ಸಂಪೂರ್ಣ ಹಿಡಿತ ಸಾಧಿಸಿದೆ. ಹಾಲಿ ಚಾಂಪಿಯನ್ ಆಗಿರುವ ಭಾರತದ ತಂಡ ಪ್ರಸ್ತುತ ಆಡಿದ ೩ ಮೂರು ಪಂದ್ಯಗಳಿಂದ ೭ ಅಂಕಗಳಿಸಿದ್ದು, ನಾಳೆ ನಡೆಯಲಿರುವ ಚೀನಾ ತೈಪೆ ವಿರುದ್ಧದ ಪಂದ್ಯದಲ್ಲಿ ಜಯ ಗಳಿಸಿದರೆ, ಸೆಮಿಫೈನಲ್ಸ್ ಸ್ಥಾನ ಖಚಿತಪಡಿಸಿಕೊಳ್ಳಲಿದೆ.

<>><><*><><<>

ನ್ಯೂಯಾರ್ಕ್‌ನಲ್ಲಿ ನಡೆಯುತ್ತಿರುವ ಯು.ಎಸ್.ಓಪನ್ ಗ್ರ್ಯಾಂಡ್‌ಸ್ಲ್ಯಾಮ್ ಟೆನಿಸ್ ಟೂರ್ನಿಯ ಪುರುಷರ ಸಿಂಗಲ್ಸ್ ವಿಭಾಗದಲ್ಲಿ ಜರ್ಮನಿಯ ಅಲೆಗ್ಸಾಂಡರ್ ಜ್ವೆರೆವ್ ಕ್ವಾರ್ಟರ್ ಫೈನಲ್ ಪ್ರವೇಶಿಸಿದ್ದಾರೆ. ಇಂದು ನಡೆದ ೧೬ರ ಸುತ್ತಿನ ಪಂದ್ಯದಲ್ಲಿ ಅವರು, ಇಟಲಿಯ ಲೂಸಿಯಾನೊ ಡರ್ಡೆರಿ ವಿರುದ್ಧ ೬-೨, ೬-೨, ೭-೬ ಅಂತರದಲ್ಲಿ ಗೆಲುವು ದಾಖಲಿಸಿದರು. ಮಹಿಳಾ ಸಿಂಗಲ್ಸ್‌ನಲ್ಲಿ ಅಮೆರಿಕಾದ ಕೊಕೊ ಗೌಫ್ ಕಜಕಿಸ್ತಾನದ ಎಲಿನಾ ರೈಬಾಕಿನಾ ಕೂಡ ಕ್ವಾರ್ಟರ್ ಫೈನಲ್ ಪ್ರವೇಶಿಸಿದ್ದಾರೆ.

<>><><*><><<>

ಜಪಾನ್‌ನ ಐಚಿ-ನಗೋಯಾದಲ್ಲಿ ೨೦೨೬ರ ಏಷ್ಯನ್ ಕ್ರೀಡಾಕೂಟ ಇದೇ ೧೯ರಿಂದ ಅಕ್ಟೋಬರ್ ೪ರವರೆಗೆ ನಡೆಯಲಿದೆ. ಆದರೆ ಕ್ರೀಡಾ ಸ್ಪರ್ಧೆಗಳು ಉದ್ಘಾಟನಾ ಸಮಾರಂಭಕ್ಕೆ ೯ ದಿನ ಮುನ್ನ, ಇದೇ ೧೦ರಿಂದಲೇ ಆರಂಭಗೊಳ್ಳಲಿವೆ. ಭಾರತದ ಸ್ಪರ್ಧಾ ಅಭಿಯಾನ ಇದೇ ೧೭ರಂದು ಟೆಕ್‌ಬಾಲ್‌ನೊಂದಿಗೆ ಆರಂಭವಾಗಲಿದೆ. ಭಾರತೀಯ ಮಹಿಳಾ ಕ್ರಿಕೆಟ್ ತಂಡ ಇದೇ ೧೮ರಂದು ಕ್ವಾರ್ಟರ್ ಫೈನಲ್‌ನಲ್ಲಿ ಜಪಾನ್ ವಿರುದ್ಧ ಸೆಣಸಲಿದೆ.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧.೩೦ ಕ್ಕೆ ><><<>**